ಶ್ರೀ ಸಿ.ಆರ್. ಸಗೀರ್ ಅಹಮದ್ (ಸಾರಿಗೆ ಸಚಿವರು) :

1) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯನ್ನೊಳಗೊಂಡ ರಾಜ್ಯ ಸಾರಿಗೆ ಸಂಸ್ಥೆಯಲ್ಲಿ ಒಟ್ಟು 67,823 ನೌಕರರು ಇರುತ್ತಾರೆ.

2) ರಾಜ್ಯಾದ್ಯಂತ 1717 ನೌಕರರಿಗೆ ವಸತಿ ಸೌಲಭ್ಯ ಕಲ್ಪಿಸಲಾಗಿರುತ್ತದೆ.

3) ಹುಡ್ಕೋನಿಂದ ಸಾಲ ಪಡೆದು ವಸತಿ ಗೃಹಗಳನ್ನು ನಿರ್ಮಿಸಲು ನಿರ್ಧರಿಸಲಾಗಿದೆ. ಆದರೆ ಸಂಸ್ಥೆಯ ಪ್ರಸ್ತುತ ಆರ್ಥಿಕ ಪರಿಸ್ಥಿತಿಯ ಕಾರಣ ಸದರಿ ನಿರ್ಧಾರವನ್ನು ಮುಂದೂಡಲಾಗಿದೆ.

## ನಕಲಿ ಛಾಪಾ ಕಾಗದ ಚಲಾವಣೆಯಾಗಿರುವ ಬಗ್ಗೆ

4882 - ಶ್ರೀ ನಾರಾಯಣ ಸ್ವಾಮಿ ಎ. (ಆನೇಕಲ್) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*1) ರಾಜ್ಯದಲ್ಲಿ ನಕಲಿ ಛಾಪಾ ಕಾಗದ ಚಲಾವಣೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?*

*2) ಹಾಗಾದಲ್ಲಿ ಈವರೆಗೆ ಎಷ್ಟು ಜನರನ್ನು ಬಂಧಿಸಲಾಗಿದೆ? ಎಷ್ಟು ಮೌಲ್ಯದ ನಕಲಿ ಛಾಪಾ ಕಾಗದಗಳನ್ನು ವಶಪಡಿಸಿಕೊಳ್ಳಲಾಗಿದೆ?*

*3) ಈ ನಕಲಿ ಛಾಪಾ ಕಾಗದ ಚಲಾವಣೆ ಮಾಡುತ್ತಿರುವವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? ವಿವರ ನೀಡುವುದು?*

*4) ಸರ್ಕಾರದ ಬೊಕ್ಕಸಕ್ಕೆ ಇದರಿಂದ ಆಗಿರುವ ನಷ್ಟದ ಅಂದಾಜು ಎಷ್ಟು?*

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

1) ಇತ್ತೀಚೆಗೆ ಗಮನಕ್ಕೆ ಬಂದಿರುತ್ತದೆ.

2) ಪ್ರಕರಣದಲ್ಲಿ 14 ಜನರನ್ನು ಬಂದಿಸಲಾಗಿದೆ ಸುಮಾರು 10 ಕೋಟಿ ರೂ.ಗಳ ನಕಲಿ ಮುದ್ರಾಂಕ ಕಾಗದಗಳನ್ನು ಪೋಲೀಸಿನವರು ವಶಕ್ಕೆ ತೆಗೆದುಕೊಂಡಿರುತ್ತಾರೆ.

3) ಹಾಲಿ ಸಂಬಂಧಪಟ್ಟ ಎಲ್ಲರನ್ನೂ ಸೇರಿಸಿ ಒಂದು ಕ್ರಿಮಿನಲ್ ಪ್ರಕರಣ ದಾಖಲು ಮಾಡಲಾಗಿದೆ. ಇಂತಹ ಪ್ರಕರಣಗಳು ಪುನರಾವರ್ತನೆ ಆಗುವುದನ್ನು ತಡೆಯಲು ಇಲಾಖೆಯಿಂದ ಒಂದು ಸಮಿತಿಯನ್ನು (Squad) ರಚಿಸಲಾಗಿದೆ.

4) ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟದ ಅಂದಾಜು ಮಾಡುವ ಕಾರ್ಯ ಪ್ರಗತಿಯಲ್ಲಿದೆ.